ದಿನಾಂಕ: 01.10.2022 ರಂದು ಮದ್ಯಾಹ್ನ 03:00 ಗಂಟೆಗೆ ವಾರ್ಡ್ ಸಂಖ್ಯೆ 203 (ಹಳೆ ವಾರ್ಡ್ ಸಂಖ್ಯೆ 180) ಬನಶಂಕರಿ ದೇವಸ್ಥಾನ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಸಿ. ಆರ್. ಸತೀಶ್ ಕುಮಾರ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಮಂಜುನಾಥ್ ವೆಂಕಣ್ಣ ನಾಯಕ – ಸಹಾಯಕ ಅಭಿಯಂತರರು (ವಾರ್ಡ್ 203(180) ಬನಶಂಕರಿ ದೇವಸ್ಥಾನ) (ಕಿಯೋನಿಕ್ಸ್)
3. ಶ್ರೀ. ಶ್ರೀನಿವಾಸ್ – ಸಹಾಯಕ ಅಭಿಯಂತರರು (ಬಿಡಬ್ಲ್ಯೂಎಸ್ಎಸ್‌ಬಿ)

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 203 (ಹಳೆ ವಾರ್ಡ್ ಸಂಖ್ಯೆ 180) ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಲಾಯಿತು. ಅಧಿಕಾರಿಗಳಿಗೆ ನಿಗಧಿತ ಅವಧಿಯೊಳಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ಡೆಬ್ರಿಸ್ ವಿಲೇವಾರಿ ಬಗ್ಗೆ.

ವಾರ್ಡ್ ವ್ಯಾಪ್ತಿಯ ಸುಬ್ರಮಣ್ಯಪುರ ಮುಖ್ಯರಸ್ತೆಯಲ್ಲಿರುವ ಬಿಡಬ್ಲ್ಯೂಎಸ್ಎಸ್‌ಬಿ ಕಛೇರಿ ಎದುರು ಕಸದ ರಾಶಿ ಇರುತ್ತದೆ. ಸದರಿಯನ್ನು ತ್ಯಾಜ್ಯವನ್ನು ವಿಲೇವಾರಿ ಮಾಡಿಸುವಂತೆ ಕೋರಿದರು. ಅದರಂತೆ ಅಧ್ಯಕ್ಷರು ಸದರಿ ಘನತ್ಯಾಜ್ಯವನ್ನು ವಿಲೇವಾರಿ ಮಾಡಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಗುತ್ತದೆ ಎಂದು ಹೇಳಿದರು.

2. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

ವಾರ್ಡ್ ವ್ಯಾಪ್ತಿಯ ಬನಶಂಕರಿ ದೇವಸ್ಥಾನದ ಮುಂಭಾಗದಲ್ಲಿ ಪಾದಚಾರಿಯನ್ನು ಒತ್ತುವರಿ ಮಾಡಿಕೊಂಡು ವ್ಯಾಪಾರ ಮಾಡುತ್ತಿದ್ದು, ಸದರಿ ಪಾದಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿದರು.

ವಾರ್ಡ್ ವ್ಯಾಪ್ತಿಯ ಉಮಾರ್‌ಭಾಗ್ ಲೇಔಟ್‌ನಲ್ಲಿರುವ ಕಮಲ ನೆಹರು ಶಾಲೆ ಎದುರು ಡೆಬ್ರಿಸ್‌ಅನ್ನು ಸುರಿದಿರುತ್ತಾರೆ. ಆದ್ದರಿಂದ ಸದರಿ ಡೆಬ್ರಿಸ್‌ಅನ್ನು ತೆಗೆಯಲು ಸಾರ್ವಜನಿಕರು ಕೋರಿದರು. ಅದರಂತೆ ಸದರಿ ಡೆಬ್ರಿಸ್‌ಅನ್ನು ತೆಗೆದು ಸವಚ್ಚಗೊಳಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ವಾರ್ಡ್ ವ್ಯಾಪ್ತಿಯ ಯಾರಬ್‌ನಗರ ಸರ್ಕಾರಿ ಶಾಲೆಯ ಎದುರು ಇರುವ ಟ್ರಾನ್ಸ್‌ಫಾರ್ಮರ್ ಬಳಿ ನೆಲದಲ್ಲಿ ವಿದ್ಯುತ್ ಸಂಚಾರವಾಗುತ್ತಿರುತ್ತದೆ(Earthing). ಆದ್ದರಿಂದ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುತ್ತದೆ ಎಂದು ಸಾರ್ವಜನಿಕರು ತಿಳಿಸಿರುತ್ತಾರೆ. ಅದರಂತೆ ಸದರಿ ಸಮಸ್ಯೆಯನ್ನು ಬಗೆಹರಿಸಲು ಬೆಸ್ಕಾಂ ಇಲಾಖೆ ರವರಿಗೆ ತಿಳಿಸಲಾಯಿತು.

ಮತದಾರರ ಗುರುತಿನ ಚೀಟಿಗೆ ಆಧಾರ್ ಜೋಡಣೆ ಮಾಡುವುದು ಹಾಗೂ 2023ನೇ ಸಾಲಿನ ಮತದಾರರ ಪಟ್ಟಿ ಪರಿಷ್ಕರಣೆಯ ಕಾರ್ಯ ನಡೆಯುತ್ತಿದ್ದು, ವಾರ್ಡ್ ವ್ಯಾಪ್ತಿಯ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ನಮೂನೆ-6, ತೆಗೆದುಹಾಕಲು ನಮೂನೆ-7 ಮತ್ತು ತಿದ್ದುಪಡಿಗೊಳಿಸಲು ನಮೂನೆ-8 ರಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಸಾರ್ವಜನಿಕರಿಗೆ ಕಂದಾಯ ಇಲಾಖೆ ಅಧಿಕಾರಿಗಳು ವಿವರಿಸಿದರು.

ಮು.ತಿ.ನೋ

ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ಕಸವನ್ನು ಸ್ವಚ್ಚಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಸಿ. ಆರ್. ಸತೀಶ್ ಕುಮಾರ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Satishkumar 3/10/22

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 203
ಬನಶಂಕರಿ ದೇವಸ್ಥಾನ